169 135

ಮೈಸೂರ ಗೆಜಿಟ.

ನಂ. 10] ಸರ್ಕಾರದಿಂದ ಘಾಯಿಷ್ ಆದ್ದು. [1895.

ಬೆಂಗಳೂರು, ಗುರುವಾರ, ಮಾರ್ಚಿ ತಾ|| 21, ಸ|| 1895.

೨ನೇ ಭಾಗ.

ಇಂಡ್ಯೆಗವರ್ನಮೆಂಟ್, ಕಿಸಿಡೆಂಟರು, ಜೀಫ್ ಜಡ್ಜ್‌ರು ವಗೈರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಇನಾಂ ಇಲಾಖಾ.

ಇಸ್ತಿಹಾರ್‌ನಾಮೆ.

ನಂ. 4. ತಾರೀಖು 8ನೇ ಮಾರ್ಚಿ ಸ|| 1895.

ಇನಾಂದಾರರಿಗೆ ಇದರಿಂದ ತಿಳಿಯಪಡಿಸುವದೇನಂದರೆ,—ಲೇಟ್ ಕಡಬ ಹಾಲಿ ಗುಬ್ಬಿ ತಾಲ್ಲೂಕಿನಲ್ಲಿ ಇರತಕ್ಕ ಜಿಲ್ಲರೆ ಇನಾಂಗಳ ಬಾಬತು (796) ಫೈನಲ್ ಟೈಟಲ್ ಡೀಡಿಯಾನೆ ಕಾಯಂಪಟ್ಟೆಗಳನ್ನ ತುಮಕೂರು ಡಿಸ್ಟ್ರಿಕ್ಟು ಡೆಪ್ಯೂಟಿ ಕಮಿಷ್ಟ್ರಷನರ್ ಸಾಹೇಬರವರ ಬಳಿಗೆ ಬಟವಾಡೆ ಬಗ್ಯೆ ಈ ತಾರೀಖಿನಲ್ಲಿ ಕಳುಹಿಸಲ್ಪಟ್ಟಿವೆ.

2. ಸದರೀ ತಾಲ್ಲೂಕಿನ ಅಮಲ್‌ದಾರರಿಂದ ಪ್ರತ್ಯೇಕ ಪ್ರತ್ಯೇಕ ನೋಟಿಸು ಬಂದಮೇಲೆ ಅವುಗಳನ್ನ ತೆಗದುಕೊಳ್ಳುವ ಬಗ್ಯೆ ಸದರೀ ಇನಾಂದಾರ್‌ರು ಏರ್ಜ ಪ್ರಕಾರ ಹಾಜರಾಗತಕ್ಕದ್ದು. ಸದರೀ ತಾಲ್ಲೂಕಿನ ಅಮಲ್‌ದಾರ್‌ರು ಅಂಥಾ ನೋಟಿಸುಗಳನ್ನು ದೇರ್ ಮಾಡದೆ ಕಳುಹಿಸಿಕೊಡತಕ್ಕದ್ದೆಂದು ಇದರಿಂದ ನಿಯಮಿಸಲ್ಪಟ್ಟು ಇರುತ್ತಾವೆ.

3. ಸದರೀ ಜಿಲ್ಲರೆ ಇನಾಂಗಳ ಬಗ್ಯೆ ಈ ಆಫಿಸಿನಿಂದ ಮೊದಲೇ ಕೊಡಲ್ಪಟ್ಟ ಜಂಗಾಮಿ ಪಟ್ಟೆಗಳು ರದ್ದು ಮಾಡಲ್ಪಟ್ಟು ಯಿರುತ್ತೆಂದು ಇದರ ದೆಸೆಯಿಂದ ಪ್ರಕಟಿಸಲ್ಪಡುತ್ತೆ.

ಜೆ. ಪಿ. ಗ್ರಾಂಟ್,
ಸೂಪರ್‌ಟೆಂಡೆಂಟ್ ಇನಾಂ ಸೆಟ್ಲ್‌ಮೆಂಟ್.